# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಕಲ್ಲೋಳ-ಯಡೂರು ರಸ್ತೆಯಲ್ಲಿ ಕೃಷ್ಣಾ ನದಿಗೆ ಅಡ್ಡಲಾಗಿ ಬ್ರಿಡ್ಜ್-ಕಂ-ಬ್ಯಾರೇಜ್ ಮರುನಿರ್ಮಾಣ ಕಾಮಗಾರಿಯ ರೂ. 35.00 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

******

**ಓದಲಾಗಿದೆ:**

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರ ಪತ್ರಸಂಖ್ಯೆ:ಕನೀನಿ/ತಾಂತ್ರಿಕ/1083/ಟಿಜಿಬಿ/2019-20/1934, ದಿನಾಂಕ: 16.07.2019.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರ ಪತ್ರ ಸಂಖ್ಯೆ: ಕನೀನಿ/ತಾಂತ್ರಿಕ/1083/ಟಿಜಿಬಿ/2019-20/6545, ದಿನಾಂಕ: 14.02.2020.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರ ಪತ್ರ ಸಂಖ್ಯೆ: ಕನೀನಿ/ತಾಂತ್ರಿಕ/1083/ಟಿಜಿಬಿ/2019-20/1302, ದಿನಾಂಕ: 07.07.2020.

**ಪ್ರಸ್ತಾವನೆ:**

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಮೇಲೆ ಓದಲಾದ (1), (2) ಮತ್ತು (3) ರ ಪತ್ರಗಳಲ್ಲಿ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಕಲ್ಲೋಳ-ಯಡೂರು ರಸ್ತೆಯಲ್ಲಿ ಕೃಷ್ಣಾ ನದಿಗೆ ಅಡ್ಡಲಾಗಿ ಬ್ರಿಡ್ಜ್-ಕಂ-ಬ್ಯಾರೇಜ್ ಮರು ನಿರ್ಮಾಣ ಕಾಮಗಾರಿಯ ರೂ. 35.00 ಕೋಟಿಗಳ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಯೋಜನೆಯಡಿ ಬೆಳಗಾವಿ ಜಿಲ್ಲೆಯ, ಚಿಕ್ಕೋಡಿ ತಾಲ್ಲೂಕಿನ ಕಲ್ಲೋಳ ಹಾಗೂ ಯಡೂರು ಗ್ರಾಮಗಳ ಮಧ್ಯದಲ್ಲಿ ಕೃಷ್ಣಾ ನದಿಗೆ ಅಡ್ಡಲಾಗಿ ಸೇತುವೆ ಸಹಿತ ಬ್ಯಾರೇಜನ್ನು 1981-82ನೇ ಸಾಲಿನಲ್ಲಿ ನಿರ್ಮಿಸಲಾಗಿದ್ದು, ಬ್ಯಾರೇಜಿನ ಉದ್ದವು 155 ಮೀ ಇದ್ದು, 62 ವೆಂಟ್‌ಗಳನ್ನೊಂಡಿರುತ್ತದೆ. ಸದರಿ ಸೇತುವೆಯು ಕೃಷ್ಣಾ ದೂಧಗಂಗಾ ಹಾಗೂ ವೇದಗಂಗಾ ನದಿಗಳ ಸಂಗಮದಲ್ಲಿರುತ್ತದೆ. ಇದು ತ್ರಿವೇಣಿ ಸಂಗಮವೆಂದು ಪ್ರಸಿದ್ದಿ ಹೊಂದಿದೆ. ಸದರಿ ಸಂಗಮದ ಹತ್ತಿರ ಯಡೂರು ಗ್ರಾಮದ ಪ್ರಸಿದ್ಧವಾದ, ಶ್ರೀ ವೀರಭದ್ರೇಶ್ವರ ದೇವಸ್ಥಾನವಿದ್ದು, ಇದು ದಕ್ಷಿಣ ಕಾಶಿ ಜ್ಯೋತಿರ್ಲಿಂಗ ಎಂದು ಹೆಸರುವಾಸಿಯಾಗಿದೆ. ಸದರಿ ಬ್ರಿಡ್ಜ್ ಕಂ ಬ್ಯಾರೇಜ್ ಗೇಟುಗಳನ್ನು ಈ ಹಿಂದೆ ಜೋಡಿಸಿ ನೀರಾವರಿಗಾಗಿ ಉಪಯೋಗಿಸಿಕೊಳ್ಳಲಾಗುತ್ತಿತ್ತು ಎಂದು ವ್ಯವಸ್ಥಾಪಕ ನಿರ್ದೇಶಕರು ವರದಿ ಮಾಡಿರುತ್ತಾರೆ.

ಸದರಿ ಬ್ಯಾರೇಜ್ ಕ್ಷೀಣಿಸಿದ್ದು, ಪ್ರವಾಹದಿಂದಾಗಿ ಪಿಯರ್ಸ್ (Piers) ಹಾನಿಗೊಳಗಾಗಿವೆ. ಪ್ರವಾಹದಿಂದ ಉಂಟಾದ ಹಾನಿಯಿಂದಾಗಿ ಸೇತುವೆಯನ್ನು ಸಂರಕ್ಷಣೆ ಮಾಡುವ ಪಿಯರ್ನ Reinforcement ಹೊರಕಾಣುತ್ತಿದೆ. ಇದರಿಂದಾಗಿ ಬ್ಯಾರೇಜ್ ಸ್ಟ್ರಕ್ಚರ್ ನೀರಿನ ರಭಸವನ್ನು ತಡೆಯಲು ಅಸಮರ್ಥವಾಗಿದ್ದು, ಬ್ಯಾರೇಜ್ ಸ್ಟ್ರಕ್ಚರ್‌ನ ಸುರಕ್ಷತೆಯು ಅನುಮಾನಸ್ಪದವಾಗಿದೆ. ಇದನ್ನು ಗಮನದಲ್ಲಿಟ್ಟುಕೊಂಡು, ಅಷ್ಟೇ ಶೇಖರಣಾ ಸಾಮರ್ಥ್ಯ ಹೊಂದಿರುವ ಹೊಸ ಬ್ಯಾರೇಜನ್ನು ನಿರ್ಮಿಸಲು ಪ್ರಸ್ತಾಪಿಸಲಾಗಿರುವುದಾಗಿ ವ್ಯವಸ್ಥಾಪಕ ನಿರ್ದೇಶಕರು ವರದಿಯನ್ನು ಸಲ್ಲಿಸಿರುತ್ತಾರೆ. (ಅಂದರೆ, ಅಸ್ತಿತ್ವದಲ್ಲಿರುವ ಬ್ಯಾರೇಜಿನ ಕೆಳಭಾಗದಲ್ಲಿಕ್ರೆಸ್ಟ್ (crest) ಮೇಲೆ 7.5 ಮೀಟರ್ ಆಳದಲ್ಲಿ ಸಣ್ಣ ಪಿಯರ್‌ಗಳ ಸರಣಿಯ ನಡುವೆ ಸೂಜಿ ಗೇಟ್‌ಗಳನ್ನು (Needle Gates)) ಸ್ಥಾಪಿಸುವ ಮೂಲಕ).

ಈಗಾಗಲೇ ಬ್ಯಾರೇಜ್‌ನ ಮೇಲ್ಬದಿಯಲ್ಲಿ ಎತ್ತರದ ಸೇತುವೆಯು ನಿರ್ಮಾಣ ಹಂತದಲ್ಲಿದ್ದು, ಇದು ಹತ್ತಿರದ ಹಳ್ಳಿಗಳ ಜನರಿಗೆ ರಸ್ತೆ ಸಂಪರ್ಕವಾಗಿ ನೆರವಾಗುತ್ತದೆ. ಇದರ ದೃಷ್ಟಿಯಿಂದ ಹೊಸ ಬ್ಯಾರೇಜ್ ಸ್ಟ್ರಕ್ಚರ್ ನಿರ್ಮಾಣವು ಶೇಖರಣೆಯ ಸ್ಟ್ರಕ್ಚರ್ ಮಾತ್ರವಾಗಿದ್ದು, ಸಾರ್ವಜನಿಕ ಸಂಪರ್ಕದ ಸೇತುವೆಯಾಗಿರುವುದಿಲ್ಲ ಎಂದು ಎಂದು ವಿವರವಾದ ವರದಿಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ತಿಳಿಸಿರುತ್ತಾರೆ.

ಕೃಷ್ಣಾ ನದಿಯಲ್ಲಿ ಉಂಟಾದ ಭೀಕರ ಪ್ರವಾಹದಿಂದ ಪ್ರಸ್ತುತ ಸದರಿ ಬ್ಯಾರೇಜ್ ಶಿಥಿಲಾವಸ್ಥೆಯಲ್ಲಿದ್ದು, ಕಂಬಗಳು, ಗೇಟುಗಳು ತುಕ್ಕು ಹಿಡಿದು ಪೂರ್ತಿ ಹಾಳಾಗಿರುತ್ತದೆ. ಇದರಿಂದಾಗಿ ಬ್ಯಾರೇಜಿನಲ್ಲಿ ನೀರನ್ನು ಸಂಗ್ರಹಿಸಲು ಸಾಧ್ಯವಾಗುತ್ತಿರುವುದಿಲ್ಲವಾದ್ದರಿಂದ ಸದರಿ ಯೋಜನೆಯಡಿ ಬರುವ ಅಚ್ಚುಕಟ್ಟು ಪ್ರದೇಶಗಳಿಗೆ ಹಾಗೂ ಅವಲಂಬಿತ ಗ್ರಾಮಗಳಿಗೆ ಕುಡಿಯುವ ನೀರಿನ ವ್ಯತ್ಯಯ ಉಂಟಾಗಿರುತ್ತದೆ. ಈ ಹಿನ್ನಲೆಯಲ್ಲಿ ರೈತರು, ಜನ ಪ್ರತಿನಿಧಿಗಳೂ ಸದರಿ ಬ್ರಿಡ್ಜ-ಕಂ-ಬ್ಯಾರೇಜ್ ಮರು ನಿರ್ಮಾಣ ಮಾಡುವಂತೆ ಒತ್ತಾಯಿಸುತ್ತಿರುತ್ತಾರೆ. ಚಿಕ್ಕೋಡಿ ತಾಲ್ಲೂಕಿನ ಕಲ್ಲೋಳ್-ಯಡೂರು ರಸ್ತೆಯಲ್ಲಿ ಕೃಷ್ಣಾ ನದಿಗೆ ಅಡ್ಡಲಾಗಿ ಬ್ರಿಡ್ಜ್-ಕಂ-ಬ್ಯಾರೇಜ್ ಮರು ನಿರ್ಮಾಣ ಮಾಡುವ ಕಾಮಗಾರಿಯನ್ನು ಯೋಜಿಸಲಾಗಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರು ವರದಿ ಮಾಡಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ದಿನಾಂಕ: 06.06.2019 ರಂದು ಜರುಗಿದ ನಿಗಮದ ಅಂದಾಜು ಪರಿಶೀಲನಾ ಸಮಿತಿ 56ನೇ ಸಭೆಯಲ್ಲಿ ಮಂಡಿಸಿದ್ದು, ಸದರಿ ಯೋಜನೆಗೆ ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆ ಪಡೆದು, ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಲು ಶಿಫಾರಸ್ಸು ಮಾಡಿರುತ್ತದೆ. ಅಂದಾಜು ಪರಿಶೀಲನಾ ಸಮಿತಿಯ ಶಿಫಾರಸ್ಸಿನಂತೆ ದಿನಾಂಕ: 09.07.2019ರಂದು ಜರುಗಿದ ಕರ್ನಾಟಕ ನೀರಾವರಿ ನಿಗಮದ ನಿರ್ದೇಶಕರ ಮಂಡಳಿಯ 88ನೇ ಸಭೆಯಲ್ಲಿ ಮಂಡಿಸಲಾಗಿದ್ದು, ಮಂಡಳಿಯು ಸದರಿ ಪ್ರಸ್ತಾವನೆಗೆ ಅನುಮೋದನೆ ನೀಡಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ ಇವರು ವರದಿ ಮಾಡಿರುತ್ತಾರೆ.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 3 ವಿದುಗ 2019, ಬೆಂಗಳೂರು,**
**ದಿನಾಂಕ: 04-02-2022.**

ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಕಲ್ಲೋಳ-ಯಡೂರು ರಸ್ತೆಯಲ್ಲಿ ಕೃಷ್ಣಾ ನದಿಗೆ ಅಡ್ಡಲಾಗಿ ಬ್ರಿಡ್ಜ್-ಕಂ-ಬ್ಯಾರೇಜ್ ಮರು ನಿರ್ಮಾಣ ಕಾಮಗಾರಿಯ ರೂ.35.00 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 59 ಆಕೋ-1/ 2020 (ಇ-ಆಫೀಸ್) ದಿನಾಂಕ : 07.10.2021 ರಲ್ಲಿ ನೀಡಿರುವ ಸಹಮತಿ ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 29 ಎಂಸಿಎಂ 2021-ಪಿಪಿಡಿ ದಿನಾಂಕ:26.10.2021 ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ. ಜಯಚಂದ್ರರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-4)
ಜಲಸಂಪನ್ಮೂಲ ಇಲಾಖೆ

**ಇವರಿಗೆ:**
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು ಇವರಿಗೆ ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಗೊಳಿಸುವಂತೆ ಹಾಗೂ ಪ್ರಕಟಿಸಿದ 100 ಪ್ರತಿಗಳನ್ನು ಇಲಾಖೆಗೆ ಕಳುಹಿಸಿಕೊಡುವಂತೆ ಕೋರಲಾಗಿದೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಎ & ಇ ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಇ & ಆರ್ ಎಸ್ ಎ ) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಜಿ & ಎಸ್ ಎಸ್ ಎ ) ಕರ್ನಾಟಕ, ಬೆಂಗಳೂರು.

4. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
5. ಮಾನ್ಯ ಜಲ ಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಜಂಟಿ ಕಾರ್ಯದರ್ಶಿ, (ಸಚಿವ ಸಂಪುಟ ಶಾಖೆ), ( ಸಚಿವ ಸಂಪುಟ ಸಂಖ್ಯೆ: ಸಿ: 28 /2022 ದಿನಾಂಕ: 25 .01.2022 ರ ಮೇರೆಗೆ )
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ ಯವರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
11. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
12. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
13. ಮುಖ್ಯ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ ನೀರಾವರಿ (ಉತ್ತರ) ಬೆಳಗಾವಿ.
14. ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು,
15. ವಿಶೇಷಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ ( ಆರ್ಥಿಕ ಕೋಶ), ವಿಧಾನಸೌಧ, ಬೆಂಗಳೂರು.
16. ಸರ್ಕಾರದ ಉಪ ಕಾರ್ಯದರ್ಶಿ (ಕೆಬಿಜೆಎನ್), ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
17. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
18. ನಿರ್ದೇಶಕರು, ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು, 10 ಪ್ರತಿಗಳು.
19. ತಾಂತ್ರಿಕ ಸಹಾಯಕರು, ಜಲಸಂನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು.
20. ಶಾಖಾ ರಕ್ಷಾ ಕಡತ/ ಹೆಚ್ಚಿನ ಪ್ರತಿ.

*******